# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 831 |
| ಮಾನ್ಯ ಸದಸ್ಯರ ಹೆಸರು | ಶ್ರೀ ಜಗದೇವ್ ಗುತ್ತೇದಾರ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24.08.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಾಳಗಿ ತಾಲೂಕಿನಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಹಾಗೂ ಎಷ್ಟು ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ; (ಸಂಪೂರ್ಣ ಮಾಹಿತಿ ನೀಡುವುದು)</td><td>ಕಲಬುರಗಿ ಜಿಲ್ಲೆಯ ಕಾಳಗಿ ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 10 ಮೆಟ್ರಿಕ್ ಪೂರ್ವ ಹಾಗೂ 02 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿನಿಲಯಗಳಿಗೆ 2026-27ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ವಿವರ ಈ ಕೆಳಕಂಡಂತಿದೆ.
<table>
<tr><th rowspan="2">ವಿದ್ಯಾರ್ಥಿ ನಿಲಯ ವಿಧ</th><th rowspan="2">ವಿದ್ಯಾರ್ಥಿ ನಿಲಯ ಗಳ ಸಂಖ್ಯೆ</th><th rowspan="2">ಮಂಜೂ ರಾತಿ ಸಂಖ್ಯೆ</th><th rowspan="2">ಸ್ವೀಕೃತ ವಾದ ಅರ್ಜಿಗಳ ವಿವರ</th><th colspan="3">ಪ್ರವೇಶ ಪಡೆದ ಅರ್ಜಿಗಳ ವಿವರ</th></tr>
<tr><th>ನವೀ ಕರಣ</th><th>ಹೊಸದು</th><th>ಒಟ್ಟು</th></tr>
<tr><td>ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯ</td><td>10</td><td>500</td><td>209</td><td>272</td><td>209</td><td>481</td></tr>
<tr><td>ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ</td><td>2</td><td>268</td><td>127</td><td>141</td><td>127</td><td>268</td></tr>
<tr><td>ಒಟ್ಟು</td><td>12</td><td>768</td><td>336</td><td>413</td><td>336</td><td>749</td></tr>
</table></td></tr>
<tr><td>ಆ)</td><td>ವಿದ್ಯಾರ್ಥಿನಿಲಯಗಳು ಹೆಚ್ಚಿನ ಸಂಖ್ಯೆಯಲ್ಲಿ ಇಲ್ಲದಿರುವುದರಿಂದ ಸ್ಥಳೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದು ನಿಜವೇ;</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಸರ್ಕಾರದ ಮಾರ್ಗಸೂಚಿಗಳ ಅನುಸಾರ ವಿದ್ಯಾರ್ಥಿ ನಿಲಯಗಳಲ್ಲಿ ಶೇ.50ರಷ್ಟು ಸ್ಥಾನಗಳನ್ನು ಸ್ಥಳೀಯ ಜಿಲ್ಲೆಯ ವಿದ್ಯಾರ್ಥಿಗಳಿಗೆ ಮೀಸಲಿರಿಸಿ SHP ಮುಖಾಂತರ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸಿ ನಂತರ ತಾಲ್ಲೂಕು ಮಟ್ಟದಲ್ಲಿ ಮಾನ್ಯ ಶಾಸಕರ ಅಧ್ಯಕ್ಷತೆಯ ಆಯ್ಕೆ ಸಮಿತಿಯ ಮೂಲಕ ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆ.<br><br>ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆ ನಂತರ ಜಿಲ್ಲೆಯಲ್ಲಿನ ಆಯಾ ತಾಲ್ಲೂಕಿನ ವಿದ್ಯಾರ್ಥಿ ನಿಲಯಗಳಲ್ಲಿ ಹೆಚ್ಚಿನ ಅರ್ಜಿಗಳ ಸ್ವೀಕೃತಿಗೆ ಪರ್ಯಾಯವಾಗಿ ಆಯಾ ಸಾಲಿಗೆ ಅನ್ವಯಿಸುವಂತೆ ಬೇಡಿಕೆ ಇರುವ ವಿದ್ಯಾರ್ಥಿನಿಲಯಗಳಲ್ಲಿ ಸ್ಥಳಾವಕಾಶ ಹಾಗೂ ಮೂಲಭೂತ ಸೌಕರ್ಯಗಳು ಲಭ್ಯವಿದ್ದಲ್ಲಿ ತಾತ್ಕಾಲಿಕವಾಗಿ ಸ್ಥಾನಗಳನ್ನು ಆಂತರಿಕ ವರ್ಗಾವಣೆ ಮಾಡಿಕೊಂಡು ಹೆಚ್ಚುವರಿ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗುತ್ತದೆ.</td></tr>
</table>

| | | |
|---|---|---|
| | | ಮುಂದುವರೆದು, ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸಿ ಪ್ರವೇಶಾತಿ ದೊರಕದ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಅನುದಾನದ ಲಭ್ಯತೆಯನುಸಾರ ಮಾಸಿಕ ರೂ.1500/-ರಂತೆ 10 ತಿಂಗಳ ಅವಧಿಗೆ ರೂ.15000/-ಗಳನ್ನು ಮಂಜೂರು ಮಾಡಲಾಗುತ್ತದೆ. |
| ಇ) | ಹಾಗಿದ್ದಲ್ಲಿ, ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು; | ಕಾಳಗಿ ತಾಲ್ಲೂಕಿಗೆ ಸಂಬಂಧಿಸಿದಂತೆ ಪ್ರವೇಶಾತಿ ಕಡಿಮೆ ಇರುವ ವಿದ್ಯಾರ್ಥಿನಿಲಯಗಳನ್ನು ಸ್ಥಳಾಂತರಿಸುವ ಹಾಗೂ ಉನ್ನತೀಕರಿಸುವ ಬಗ್ಗೆ ಹಂತದಲ್ಲಿ ಪರಿಶೀಲಿಸಿ ವರದಿ ಸಲ್ಲಿಸಲು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ತಿಳಿಸಲಾಗಿದೆ.<br>ಮುಂದುವರೆದು, 2026-27ನೇ ಸಾಲಿನಲ್ಲಿ ಕಲಬುರಗಿ ಜಿಲ್ಲೆಗೆ ತಲಾ 150 ಸಂಖ್ಯಾಬಲದ ಒಂದು ಮೆಟ್ರಿಕ್ ನಂತರದ ಬಾಲಕರ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದ್ದು, ನಿವೇಶನ ಮತ್ತು ಅನುದಾನದ ಲಭ್ಯತೆಯನುಸಾರ ಸ್ವಂತ ಕಟ್ಟಡ ನಿರ್ಮಾಣಕ್ಕೆ ಕ್ರಮವಹಿಸಲಾಗುವುದು. |
| ಈ) | ಪ್ರಸ್ತುತ ಸಾಲಿನಲ್ಲಿಯೇ ಬಾಲಕರ ಮತ್ತು ಬಾಲಕಿಯ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ ಪ್ರಸಕ್ತ ಸಾಲಿನಲ್ಲಿಯೇ ವಿದ್ಯಾರ್ಥಿ ನಿಲಯಗಳ ಕಟ್ಟಡಗಳ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದೇ? (ವಿವರಗಳನ್ನು ನೀಡುವುದು) | |

ಸಂಖ್ಯೆ:ಹಿಂವಕ **649** ಬಿಎಂಎಸ್ **2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು